ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 24ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತಮೂರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಇಪ್ಪತ್ತಮೂರನೇ ಪಟ್ಟಿ

2. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಎಂ. ಕೃಷ್ಣಾರೆಡ್ಡಿ, ಸುರೇಶ್‌ಗೌಡ, ವೆಂಕಟರಾವ್ ನಾಡಗೌಡ, ಬಂಡೆಪ್ಪ ಖಾಶೆಂಪೂರ್ ಹಾಗೂ ಇತರರು – ರಾಜ್ಯದಲ್ಲಿ ನಡೆದ ಹಲವಾರು ಅಹಿತಕರ ಘಟನೆಗಳಿಂದ ಶಾಲಾ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಲು ಸಾಧ್ಯವಾಗದ ಪರಿಸ್ಥಿತಿ ಉಂಟಾಗಿದ್ದು, ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಉಂಟಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

ಹಾಗೂ

ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ. ಅಜಯ್ ಧರ್ಮಸಿಂಗ್, ಎಂ.ಬಿ. ಪಾಟೀಲ್, ಡಿ.ಕೆ. ಶಿವಕುಮಾರ್, ಕೃಷ್ಣ ಬೈರೇಗೌಡ ಹಾಗೂ ಇತರರು – ರಾಜ್ಯದಲ್ಲಿ ಇತ್ತೀಚೆಗೆ ಸಂಭವಿಸುತ್ತಿರುವ ವಿದ್ಯಮಾನಗಳಿಂದ ಕುಸಿದು ಬೀಳುತ್ತಿರುವ ಕಾನೂನು ಸುವ್ಯವಸ್ಥೆಯನ್ನು ಸರಿಪಡಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

... 2/

3. ವಿತ್ತೀಯ ಕಾರ್ಯಕಲಾಪ

ಅ) 2021–22ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಮತ್ತು ಮತಕ್ಕೆ ಹಾಕುವುದು.

ಆ) 2022–23ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಚರ್ಚೆ.

ಅಭಿಯಾಚನೆ ಸಂಖ್ಯೆ	ಅಭಿಯಾಚನೆಯ ಹೆಸರು
01	ಕೃಷಿ ಮತ್ತು ತೋಟಗಾರಿಕೆ
05	ಒಳಾಡಳಿತ ಮತ್ತು ಸಾರಿಗೆ
07	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
10	ಸಮಾಜ ಕಲ್ಯಾಣ
11	ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ
14	ಕಂದಾಯ
20	ಲೋಕೋಪಯೋಗಿ
21	ಜಲಸಂಪನ್ಮೂಲ
23	ಕಾರ್ಮಿಕ ಮತ್ತು ಕೌಶಲ್ಯಾಭಿವೃದ್ಧಿ
08	ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ
09	ಸಹಕಾರ
13	ಆಹಾರ ಮತ್ತು ನಾಗರಿಕ ಸರಬರಾಜು
22	ಆರೋಗ್ಯ ಮತ್ತು ಕುಟುಂಬ ಕಲ್ಯಾಣ
24	ಇಂಧನ
02	ಪಶು ಸಂಗೋಪನೆ ಮತ್ತು ಮೀನುಗಾರಿಕೆ
03	ಆರ್ಥಿಕ
04	ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
06	ಮೂಲಭೂತ ಸೌಕರ್ಯ ಅಭಿವೃದ್ಧಿ
12	ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು
15	ಮಾಹಿತಿ ತಂತ್ರಜ್ಞಾನ
16	ವಸತಿ
17	ಶಿಕ್ಷಣ
18	ವಾಣಿಜ್ಯ ಮತ್ತು ಕೈಗಾರಿಕೆ
19	ನಗರಾಭಿವೃದ್ಧಿ
25	ಕನ್ನಡ ಮತ್ತು ಸಂಸ್ಕೃತಿ
26	ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ
27	ಕಾನೂನು
28	ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

4. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಕೆ.ಎಸ್. ಈಶ್ವರಪ್ಪ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:–

ಅ) 2022ನೇ ಸಾಲಿನ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಲಾಲಾಜಿ ಆರ್. ಮೆಂಡನ್ ಅವರು** – ಕಾಪು ವಿಧಾನಸಭಾ ಕ್ಷೇತ್ರದ ಪಡುಬಿದ್ರಿ ಗ್ರಾಮದಲ್ಲಿ ಸುಝಲಾನ್ ಸಂಸ್ಥೆಯ ಅನುಪಯುಕ್ತ ಜಾಗವನ್ನು ಕಸ ವಿಲೇವಾರಿ ಮಾಡಲು ಪಡುಬಿದ್ರಿ ಗ್ರಾಮ ಪಂಚಾಯತ್‌ಗೆ ಹಸ್ತಾಂತರಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

2) **ಶ್ರೀ ಸಿ.ಎನ್. ಬಾಲಕೃಷ್ಣ ಅವರು** – ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಾಹನ ಚಾಲಕರು, ವಾಟರ್ ಮ್ಯಾನ್ ಮತ್ತು ಡಾಟಾ ಆಪರೇಟರ್‌ಗಳಿಗೆ ಗುತ್ತಿಗೆ ಬದಲು ಪೌರಕಾರ್ಮಿಕರ ಮಾದರಿಯಲ್ಲಿ ನೇರ ವೇತನ ಜಾರಿಗೊಳಿಸುವ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

3) **ಶ್ರೀ ಕೃಷ್ಣ ಬೈರೇಗೌಡ ಅವರು** – ಬೆಂಗಳೂರಿನಲ್ಲಿ ಅನುಮತಿ ಇಲ್ಲದೆ ನಿರ್ಮಿಸುವ ಮನೆಗಳನ್ನು ಸಕ್ರಮಗೊಳಿಸಲು ಕಾನೂನು ಅಂಗೀಕಾರವಾಗಿದ್ದರೂ ಸಹ ಸದರಿ ಮನೆಗಳು ಅಕ್ರಮವೆಂದು ಪರಿಗಣಿಸಿ ಕ್ರಮ ಕೈಗೊಳ್ಳಲಾಗುವುದೆಂದು ಬಿ.ಬಿ.ಎಂ.ಪಿ ವತಿಯಿಂದ ನೋಟೀಸ್ ಜಾರಿ ಮಾಡುತ್ತಿರುವುದರಿಂದ ಸಾಮಾನ್ಯ ವರ್ಗದ ಜನರಿಗೆ ಆತಂಕ ಉಂಟಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀಮತಿ ಕೆ. ಪೂರ್ಣಿಮಾ ಅವರು** – ವಾಣಿ ವಿಲಾಸ ಸಾಗರ ಯೋಜನೆಯಡಿ ನೀರಾವರಿ ಸೌಲಭ್ಯ ಒದಗಿಸಲಾದ ತಾಲ್ಲೂಕುಗಳ ವಿವರ, ಸದರಿ ಜಲಾಶಯ ಮತ್ತು ಅದರ ನಾಲೆ, ಕಾಲುವೆ ಮತ್ತು ಸ್ಟ್ರಕ್ಚರ್‌ಗಳು ಶಿಥಿಲಾವಸ್ಥೆಗೆ ತಲುಪಿದ್ದು, ಕೊನೆ ಅಂಚಿನ ಅಚ್ಚುಕಟ್ಟು ಪ್ರದೇಶಕ್ಕೆ ನೀರು ಸಮರ್ಪಕವಾಗಿ ಪೂರೈಸುವ ಬಗ್ಗೆ ಹಾಗೂ ವಾಣಿ ವಿಲಾಸ ಸಾಗರ ಜಲಾಶಯದ ನಾಲೆಗಳನ್ನು ಏಷಿಯನ್ ಡೆವಲಪ್‌ಮೆಂಟ್ ಬ್ಯಾಂಕ್ ಧನ ಸಹಾಯದೊಂದಿಗೆ ಆಧುನೀಕರಣ ಮಾಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

5) **ಡಾ. ಯತೀಂದ್ರ ಸಿದ್ದರಾಮಯ್ಯ ಅವರು** – ರಾಜ್ಯದಲ್ಲಿ ಕೋವಿಡ್–19 ಸಾಂಕ್ರಾಮಿಕ ಕಾಯಿಲೆಯ 1 ಮತ್ತು 2ನೇ ಅಲೆಯ ಸಂದರ್ಭದಲ್ಲಿ ಕರೋನಾ ರೋಗಿಗಳ ಆರೈಕೆ ಮಾಡಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಖಾಯಂ ಶುಶ್ರೂಷಾಧಿಕಾರಿಗಳಿಗೆ ಮಂಜೂರು ಮಾಡಿದ ಮಾದರಿಯಲ್ಲಿಯೇ ವೈದ್ಯಕೀಯ ಶಿಕ್ಷಣ ಇಲಾಖೆಯ ಖಾಯಂ ಶುಶ್ರೂಷಾಧಿಕಾರಿಗಳಿಗೂ ಅಪಾಯ ಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು** – ಹಾಸನ ಜಿಲ್ಲೆಯ ಎಡದಂಡೆ ಮೊಸಳೆ ಬ್ರ್ಯಾಂಚ್ ನಾಲಾ ನಿರ್ಮಾಣಕ್ಕಾಗಿ ಕಟ್ಟಾಯ ಹೋಬಳಿಯ ಕಿತ್ತಾನೆ ದಾಖಲೆಯ ಗ್ರಾಮಗಳ ಜಮೀನನ್ನು ನೇರ ಖರೀದಿಗಾಗಿ ಭೂಮಾಲೀಕರಿಗೆ ನಿಗದಿಪಡಿಸಿರುವ ಪರಿಹಾರ ಧನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

7) **ಶ್ರೀ ಸಿದ್ದು ಸವದಿ ಅವರು** – ರಾಜ್ಯದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಸೀರೆಯನ್ನು ಕೆ.ಹೆಚ್.ಡಿ.ಸಿ.ಯಿಂದ ಖರೀದಿಸಲು ನೀಡಿರುವ ಆದೇಶವಾಗಿದ್ದರೂ ಸಹ ಟೆಂಡರ್ ಕರೆಯಲು ನಿರ್ಧರಿಸಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

8) **ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ ಬಯ್ಯಾಪುರ ಅವರು** – ಕೊಪ್ಪಳ ಜಿಲ್ಲೆಯ ಕುಷ್ಟಗಿ ಪಟ್ಟಣದಲ್ಲಿನ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮಕ್ಕೆ ಸೇರಿದ ಜಮೀನನ್ನು ಒತ್ತುವರಿ ಮಾಡಿರುವವರ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಹಾಗೂ ಸದರಿ ಜಮೀನನ್ನು ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸಲು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ವಹಿಸುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರ ಗಮನ ಸೆಳೆಯುವುದು.

9) **ಶ್ರೀ ವೆಂಕಟರಾವ್ ನಾಡಗೌಡ ಅವರು** – ರಾಜ್ಯದಲ್ಲಿ ಆರ್.ಟಿ.ಐ. ಕಾರ್ಯಕರ್ತರಿಂದ ಅಧಿಕಾರಿಗಳಿಗೆ ಹಾಗೂ ಗುತ್ತಿಗೆದಾರರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

10) **ಶ್ರೀ ಉದಯ್ ಬಿ. ಗರುಡಾಚಾರ್ ಅವರು** – ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಕಲಾಸಿಪಾಳ್ಯದಲ್ಲಿ ಹೊಸದಾಗಿ ನಿರ್ಮಿಸುತ್ತಿರುವ ಆಧುನಿಕ ಬಸ್ ಟರ್ಮಿನಲ್ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಶೀಘ್ರವಾಗಿ ಪೂರ್ಣಗೊಳಿಸುವ ಬಗ್ಗೆ ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

11) **ಶ್ರೀ ಎಂ. ಕೃಷ್ಣಪ್ಪ (ಬೆಂಗಳೂರು ದಕ್ಷಿಣ) ಅವರು** – ಬೆಂಗಳೂರು ದಕ್ಷಿಣ ವಿಧಾನಸಭಾ ಕ್ಷೇತ್ರ ಕಾವೇರಿ ಕುಡಿಯುವ ನೀರು 5ನೇ ಹಂತ ಯೋಜನೆಯಡಿ ದೊಡ್ಡತೋಗೂರು ಪಟ್ಟಣ ಪಂಚಾಯಿತಿ ಹಾಗೂ ಕೋನಪ್ಪನ ಅಗ್ರಹಾರ ಪುರಸಭೆ ವ್ಯಾಪ್ತಿಯ ಪ್ರದೇಶಗಳಿಗೆ ಕಾವೇರಿ ಕುಡಿಯುವ ನೀರಿನ ಸಂಪರ್ಕ ಒದಗಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm